**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 956+950 |
| ಸದಸ್ಯರ ಹೆಸರು | : | ಶ್ರೀ. ಕೆ.ಹರೀಶ್ ಕುಮಾರ್ ಮತ್ತು ಶ್ರೀ ಎಸ್. ರವಿ |
| ಉತ್ತರಿಸುವ ದಿನಾಂಕ | : | 24.02.2023 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ ನಿಲಯವೊಂದರಲ್ಲಿ ಸರ್ಕಾರವು ನಿಗಧಿಪಡಿಸಿರುವ ಆಹಾರದ ಮೆನು ಪ್ರಕಾರ ಊಟ ನೀಡದಿದ್ದಕ್ಕೆ ಮತ್ತು ಈ ಹಾಸ್ಟೆಲ್‌ನಲ್ಲಿ ಪ್ರತಿದಿನ ಕಳಪೆ ಊಟ ನೀಡುತ್ತಿದ್ದ ಬಗ್ಗೆ ಪ್ರಸ್ತಾಪಿಸಿದಂತಹ 25 ವಿದ್ಯಾರ್ಥಿಗಳನ್ನು ಹಾಸ್ಟೆಲ್ ನಿಂದ ಹೊರಹಾಕಿದ ಪ್ರಕರಣವು ಇತ್ತೀಚೆಗೆ ನಡೆದಿರುವುದು ನಿಜವೇ; (ವಿವರ ನೀಡುವುದು) | ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಬಳ್ಳಾರಿ ಜಿಲ್ಲೆಯಲ್ಲಿ 4 ಮೆಟ್ರಿಕ್ ಪೂರ್ವ ಹಾಗೂ 10 ಮೆಟ್ರಿಕ್ ನಂತರದ ಬಾಲಕ /ಬಾಲಕಿಯರ ವಿದ್ಯಾರ್ಥಿನಿಲಯಗಳು ಮತ್ತು 2 ವಾಲ್ಮೀಕಿ ಆಶ್ರಮ ಶಾಲೆಗಳು ಸೇರಿ ಒಟ್ಟು 16 ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಸಂಸ್ಥೆಗಳಲ್ಲಿ ಒಟ್ಟಾರೆ 2772 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ. P<br>• ದಿನಾಂಕ:25.01.2023 ರಂದು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ನಂ.1, ಸಿ.ಬಿ, ಬಳ್ಳಾರಿ ಇಲ್ಲಿ ಮೆನು ಚಾರ್ಟ್ ಪ್ರಕಾರ ರಾತ್ರಿ ಊಟಕ್ಕೆ ಕೋಳಿ ಸಾರು ಮತ್ತು ಅನ್ನ ತಯಾರಿಸಲಾಗಿರುತ್ತದೆ.<br>• ಸದರಿ ವಿದ್ಯಾರ್ಥಿನಿಲಯದಲ್ಲಿ 300 ಮಂಜೂರಾತಿ ಸಂಖ್ಯೆ ಅನುಗುಣವಾಗಿ 300 ವಿದ್ಯಾರ್ಥಿಗಳು ದಾಖಲಾಗಿದ್ದು, ಈ ಪೈಕಿ 275 ವಿದ್ಯಾರ್ಥಿಗಳು ಊಟ ಸೇವಿಸಿರುತ್ತಾರೆ. ಉಳಿದ 25 ವಿದ್ಯಾರ್ಥಿಗಳು ಕೋಳಿ ಸಾರಿನಲ್ಲಿ ಮಸಾಲೆ ಹೆಚ್ಚಾಗಿದೆ ಎಂದು ಪ್ರತಿಭಟಿಸಿರುತ್ತಾರೆ.<br>• ಇದಕ್ಕೆ ಸಂಬಂಧಿಸಿದಂತೆ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಬಳ್ಳಾರಿ ರವರು ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿ, ಅಡುಗೆ ಸಿಬ್ಬಂದಿಗೆ ಇಂತಹ ಸಮಸ್ಯೆಗಳು ಮರುಕಳಿಸದಂತೆ ನೋಡಿಕೊಳ್ಳಲು ಸೂಚಿಸಿರುತ್ತಾರೆ.<br>• ವಿದ್ಯಾರ್ಥಿಗಳಲ್ಲಿ ಶಿಸ್ತು ಮೂಡಿಸುವ ಉದ್ದೇಶದಿಂದ ದಿ:26-01-2023 ರಂದು ಬೆಳಿಗ್ಗೆ ನಿಲಯ ಪಾಲಕರು ನಿಲಯದ 25 ವಿದ್ಯಾರ್ಥಿಗಳಿಗೆ ಲಗೇಜ್ ತೆಗೆದುಕೊಂಡು ಹೋಗಲು ತಿಳಿಸಿರುತ್ತಾರೆ. ಇದರಿಂದ ಅಸಮಧಾನಗೊಂಡ ವಿದ್ಯಾರ್ಥಿಗಳು ಮಾನ್ಯ ಸಚಿವರು, ಸಾರಿಗೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರ ಕಛೇರಿಗೆ ತೆರಳಿ ವಿಷಯವನ್ನು ಪ್ರಸ್ತಾಪಿಸಿ, ವಿದ್ಯಾರ್ಥಿ ನಿಲಯದಿಂದ ತಮ್ಮನ್ನು ತೆಗೆಯಬಾರದಾಗಿ ಮನವಿ ಮಾಡಿಕೊಂಡಿರುತ್ತಾರೆ.<br>• ಈ ಕುರಿತು ದಿನಾಂಕ:27-01-2023ರಂದು ಕೆಲ ವಿದ್ಯಾರ್ಥಿಗಳು ಜಿಲ್ಲಾಧಿಕಾರಿಗಳನ್ನು ಭೇಟಿಯಾಗಿದ್ದು, ಈ ವೇಳೆ ಜಿಲ್ಲಾಧಿಕಾರಿಗಳು ವಸತಿ ನಿಲಯದ ವಿದ್ಯಾರ್ಥಿಗಳಿಗೆ ಶಿಸ್ತಿನಿಂದ ಇರಬೇಕಾಗಿ ಮತ್ತು ವಿದ್ಯಾಭ್ಯಾಸದ ಬಗ್ಗೆ ಕಾಳಜಿ ವಹಿಸಬೇಕಾಗಿ ಹಾಗೂ ವಿದ್ಯಾರ್ಥಿ ನಿಲಯದಿಂದ ಯಾವುದೇ ವಿದ್ಯಾರ್ಥಿಯನ್ನು ತೆಗೆದಿರುವುದಿಲ್ಲವೆಂದು ತಿಳಿಹೇಳಿರುತ್ತಾರೆ.<br>• ಯಾವುದೇ ವಿದ್ಯಾರ್ಥಿಗಳನ್ನು ವಿದ್ಯಾರ್ಥಿನಿಲಯದಿಂದ ತೆಗೆದಿರುವುದಿಲ್ಲ. |

| | | |
|---|---|---|
| ಆ) | ಈ ರೀತಿ ಕ್ರಮ ಕೈಗೊಂಡ ಅಧಿಕಾರಿಗಳ ವಿರುದ್ಧ ಸರ್ಕಾರವು ಏನು ಶಿಸ್ತು ಕ್ರಮ ಕೈಗೊಂಡಿದೆ? (ವಿವರ ಒದಗಿಸುವುದು) | • ದಿನಾಂಕ:25.01.2023ರಂದು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ನಂ.1, ಸಿ.ಬಿ., ಬಳ್ಳಾರಿ ಇಲ್ಲಿ ಊಟದ ಸಮಸ್ಯೆಯ ಕುರಿತು ಪ್ರಜಾವಾಣಿ ಪತ್ರಿಕೆಯಲ್ಲಿ ಪ್ರಕಟವಾದ ವರದಿಗೆ ಸಂಬಂಧಿಸಿದಂತೆ ವಿವರವಾದ ವರದಿಯನ್ನು ಸಲ್ಲಿಸುವಂತೆ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬಳ್ಳಾರಿ ಜಿಲ್ಲೆ ರವರಿಗೆ ಸೂಚಿಸಲಾಗಿರುತ್ತದೆ. ಈ ಬಗ್ಗೆ ದಿನಾಂಕ:30.01.2023ರಂದು ಸರ್ಕಾರಕ್ಕೆ ವಿವರವಾದ ವರದಿಯನ್ನು ಸಲ್ಲಿಸಲಾಗಿರುತ್ತದೆ.<br>• ಸದರಿ ವಿದ್ಯಾರ್ಥಿನಿಲಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ನಿಲಯಪಾಲಕರು ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು ಇವರನ್ನು ಮಾತೃ ಇಲಾಖೆಗೆ ಹಿಂದಿರುಗಿಸಿ, ಇವರ ಸ್ಥಾನಕ್ಕೆ ದಿನಾಂಕ:01.02.2023 ರಂದು ಬೇರೊಬ್ಬ ನಿಲಯ ಮೇಲ್ವಿಚಾರಕರನ್ನು ನಿಯೋಜಿಸಲಾಗಿರುತ್ತದೆ.<br>• ನಿಲಯ ಮೇಲ್ವಿಚಾರಕರು ಪ್ರತಿದಿನ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡುವಂತೆ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿ ರವರಿಗೆ ಆಗಾಗ್ಗೆ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿನಿಲಯವು ಸುವ್ಯವಸ್ಥಿತವಾಗಿ ನಡೆಯುವಂತೆ ಹಾಗೂ ಮೆನು ಚಾರ್ಟ್‌ನಂತೆ ರುಚಿಯಾದ ಊಟ-ತಿಂಡಿ ನೀಡಲು ಮತ್ತು ಸರ್ಕಾರದಿಂದ ಒದಗಿಸಲಾಗುತ್ತಿರುವ ಮೂಲಭೂತ ಸೌಕರ್ಯಗಳನ್ನು ನಿಗಧಿತ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. |

ಸಕಇ 40 ಎಸ್‌ಟಿಪಿ 2023

(ಬಿ. ಶ್ರೀರಾಮುಲು)
ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು